# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 477
2. ಸದಸ್ಯರ ಹೆಸರು : ಶ್ರೀ ಐವನ್ ಡಿ' ಸೋಜಾ
3. ಉತ್ತರಿಸುವ ದಿನಾಂಕ : 14/08/2025
4. ಉತ್ತರಿಸುವ ಸಚಿವರು : ಲೋಕೋಪಯೋಗಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಎಷ್ಟು ನೂತನ ಕೋರ್ಟ್ ಕಟ್ಟಡ ನಿರ್ಮಾಣ ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆ; ಯಾವ ಯಾವ ಕೋರ್ಟ್‌ಗಳಿಗೆ ಕಟ್ಟಡ ನಿರ್ಮಾಣ ಮತ್ತು ವಿಸ್ತರಣೆಗೆ ಹಣ ಒದಗಿಸಲಾಗಿದೆ; (ವಿವರ ನೀಡುವುದು) | ಲೋಕೋಪಯೋಗಿ ಇಲಾಖೆ, ಮಂಗಳೂರು ವಿಭಾಗದ ವ್ಯಾಪ್ತಿಯಲ್ಲಿ ಮಂಗಳೂರು ನ್ಯಾಯಾಂಗ ಸಂಕೀರ್ಣ ಕಟ್ಟಡ ನಿರ್ಮಾಣ ಕಾಮಗಾರಿಗೆ ರೂ.60.20 ಕೋಟಿ ಹಾಗೂ ಬೆಳ್ತಂಗಡಿ ನ್ಯಾಯಾಂಗ ಸಂಕೀರ್ಣ ಕಟ್ಟಡ ನಿರ್ಮಾಣಕ್ಕಾಗಿ ರೂ.9.00 ಕೋಟಿ ಅನುದಾನ ಮಂಜೂರಾಗಿರುತ್ತದೆ.<br><br>ಬಂಟ್ವಾಳದಲ್ಲಿ ನೂತನ ಕೋರ್ಟ್ ಕಟ್ಟಡ ನಿರ್ಮಾಣದ ಸಂಬಂಧ ರೂ.29.00 ಕೋಟಿ ಮೊತ್ತದಲ್ಲಿ ವಿವರವಾದ ಅಂದಾಜು ಪಟ್ಟಿಯನ್ನು ತಯಾರಿಸಲಾಗಿದ್ದು, ಪ್ರಸ್ತುತ ಲೋಕೋಪಯೋಗಿ ಇಲಾಖೆಯಡಿ ಅಧಿಕ ಕಾರ್ಯಭಾರವಿದ್ದು, ಪ್ರಸ್ತಾವನೆಯನ್ನು ಮುಂದೂಡುವಂತೆ ಆರ್ಥಿಕ ಇಲಾಖೆಯು ತಿಳಿಸಿರುವ ಮೇರೆಗೆ ಸದರಿ ನ್ಯಾಯಾಲಯ ಕಟ್ಟಡ ನಿರ್ಮಿಸುವ ಯೋಜನೆಯನ್ನು ಮುಂದೂಡಲಾಗಿದೆ.<br><br>ಲೋಕೋಪಯೋಗಿ ಇಲಾಖೆ, ಉಡುಪಿ ವಿಭಾಗದ ಉಡುಪಿ ಜಿಲ್ಲಾ ನ್ಯಾಯಾಲಯಕ್ಕೆ ಹೊಸ ನ್ಯಾಯಾಲಯ ಸಂಕೀರ್ಣ ಕಟ್ಟಡ ನಿರ್ಮಾಣಕ್ಕೆ 2022-23ನೇ ಸಾಲಿನಲ್ಲಿ ರೂ.15.14 ಕೋಟಿ ಅನುದಾನ ಒದಗಿಸಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿರುತ್ತದೆ.<br>ಉಡುಪಿ ಜಿಲ್ಲೆ ಬೈಂದೂರು ತಾಲ್ಲೂಕಿನಲ್ಲಿ ಹೊಸ ನ್ಯಾಯಾಲಯ ಕಟ್ಟಡ ನಿರ್ಮಾಣಕ್ಕೆ ರೂ.17.00 ಕೋಟಿ ಅನುದಾನ ಒದಗಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. ಬ್ರಹ್ಮಾವರ ತಾಲ್ಲೂಕಿನಲ್ಲಿ ಹೊಸ ಕಟ್ಟಡ ನಿರ್ಮಾಣಕ್ಕೆ ನಿವೇಶನ ಕಾಯ್ದಿರಿಸಲಾಗಿದ್ದು, ಅನುದಾನ ಬೇಡಿಕೆಗೆ ಪ್ರಸ್ತಾವನೆ ಸರ್ಕಾರಕ್ಕೆ ಸ್ವೀಕೃತವಾಗಬೇಕಾಗಿದೆ. |
| ಆ) | ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿ ನೂತನವಾಗಿ ಕೋರ್ಟ್ ಕಟ್ಟಡ ನಿರ್ಮಾಣ ಎಂದು ಪ್ರಾರಂಭಗೊಳ್ಳುವುದು; ಇದಕ್ಕೆ ಒದಗಿಸಿದ ಹಣ ಎಷ್ಟು; (ವಿವರ ನೀಡುವುದು) | 2025-26ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ:4059-80-051-0-32-386-ನ್ಯಾಯಾಲಯ ಕಟ್ಟಡಗಳ ನಿರ್ಮಾಣ ಅಡಿಯಲ್ಲಿ ಬೆಳ್ತಂಗಡಿ ತಾಲ್ಲೂಕಿನಲ್ಲಿ ನೂತನವಾಗಿ ಕೋರ್ಟ್ ಕಟ್ಟಡ ನಿರ್ಮಾಣಕ್ಕಾಗಿ ರೂ.9.00 ಕೋಟಿ ಅನುದಾನ ಮಂಜೂರಾಗಿದೆ.<br><br>ಮುಖ್ಯ ವಾಸ್ತುಶಿಲ್ಪಿಯವರಿಂದ ನಕ್ಷೆಯನ್ನು ಪಡೆದುಕೊಂಡು, ಪ್ರಸ್ತುತ ಒದಗಿಸಿರುವ ರೂ.9.00 ಕೋಟಿಗಳ ಅನುದಾನಕ್ಕೆ ಅನುಗುಣವಾಗಿ ವಿನ್ಯಾಸ ನಕ್ಷೆಯೊಂದಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ, |

| | | |
|---|---|---|
| | | ನಿಯಮಾನುಸಾರ ಟೆಂಡರ್ ಕರೆದು ಗುತ್ತಿಗೆದಾರರನ್ನು ನೇಮಿಸಿ, ನಿರ್ದಿಷ್ಟ ಕಾಲಮಿತಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲಾಗುತ್ತದೆ. |
| ಇ) | ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳದಲ್ಲಿ ಕೋರ್ಟ್ ಕಟ್ಟಡವು ತೀರಾ ಹಳೆಯಾಗಿದ್ದು, ನೂತನ ಕಟ್ಟಡವನ್ನು ನಿರ್ಮಿಸಬೇಕೆಂಬ ಪ್ರಸ್ತಾವನೆಗೆ ಸರ್ಕಾರವು ಕೈಗೊಂಡಿರುವ ಕ್ರಮವೇನು; (ವಿವರ ನೀಡುವುದು) | ಲೋಕೋಪಯೋಗಿ ಇಲಾಖೆಯಲ್ಲಿ ಅನುಮೋದಿತ ಕಾಮಗಾರಿಗಳ ಕಾರ್ಯಭಾರವು ಅಧಿಕವಾಗಿರುವುದರಿಂದ ಬಂಟ್ವಾಳ ತಾಲ್ಲೂಕು ನ್ಯಾಯಾಲಯ ಆವರಣದಲ್ಲಿ ನೂತನ ಬಹುಮಹಡಿ ನ್ಯಾಯಾಲಯ ಸಂಕೀರ್ಣ ಕಟ್ಟಡ ನಿರ್ಮಾಣಕ್ಕೆ ರೂ.29.00 ಕೋಟಿ ಅಂದಾಜು ಮೊತ್ತದಲ್ಲಿ ಕೈಗೊಳ್ಳುವ ಕಾಮಗಾರಿಯ ಪ್ರಸ್ತಾವನೆಯನ್ನು ಮುಂದೂಡಲಾಗಿತ್ತು. ಪ್ರಸ್ತುತ ಈ ಪ್ರಸ್ತಾವನೆಯ ಕುರಿತು ಪುನರ್ ಪರಿಶೀಲಿಸಲು ಕೆಲವೊಂದು ಅಂಶಗಳಿಗೆ ಮಾಹಿತಿ/ದಾಖಲೆ ಒದಗಿಸುವಂತೆ ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಮತ್ತು ಮುಖ್ಯ ವಾಸ್ತುಶಿಲ್ಪಿ, ಲೋಕೋಪಯೋಗಿ ಇಲಾಖೆ, ಬೆಂಗಳೂರು ಇವರನ್ನು ಕೋರಲಾಗಿದ್ದು, ಮಾಹಿತಿ ಸ್ವೀಕೃತವಾದ ನಂತರ ಅನುದಾನ ಲಭ್ಯತೆಯಂತೆ ಕ್ರಮ ವಹಿಸಲಾಗುತ್ತದೆ. |
| (ಈ) | ಮಂಗಳೂರು ಜಿಲ್ಲಾ ನೂತನ ನ್ಯಾಯಾಲಯದ ವಿಸ್ತರಣೆಯ ಕಟ್ಟಡ ಎಂದು ಪ್ರಾರಂಭಗೊಳ್ಳುವುದು; ಇದಕ್ಕೆ ಬಿಡುಗಡೆ ಮಾಡಿದ ಹಣ ಎಷ್ಟು? (ವಿವರ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ತಾಲ್ಲೂಕಿನ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಬಹುಮಹಡಿ ನ್ಯಾಯಾಲಯ ಸಂಕೀರ್ಣ ಕಟ್ಟಡ Block-A, ನಿರ್ಮಾಣ ಕಾಮಗಾರಿ, ಅಂದಾಜು ಮೊತ್ತ ರೂ.60.20 ಕೋಟಿಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಲೋಇ 20 ಬಿಜೆಪಿ 2024 ದಿನಾಂಕ:13.11.2024ರಂತೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ.<br><br>ಅದರಂತೆ, ಅಂದಾಜು ಪಟ್ಟಿಯನ್ನು ತಯಾರಿಸಿ ದಿನಾಂಕ:11.06.2025ರಂದು ನಡೆದ ರಾಜ್ಯ ಮಟ್ಟದ ತಾಂತ್ರಿಕ ಸಲಹಾ ಮತ್ತು ಅಂದಾಜುಪಟ್ಟಿ ಪರಿಶೀಲನಾ ಸಮಿತಿಯ 149ನೇ ಸಭೆಯಲ್ಲಿ ಮಂಡಿಸಲಾಗಿದ್ದು, ನೀಡಲಾಗಿರುವ ಸಲಹೆ ಸೂಚನೆಗಳನ್ನು ಅಂದಾಜು ಪಟ್ಟಿಯಲ್ಲಿ ಅಳವಡಿಸಿಕೊಂಡು ಮುಂಬರುವ ರಾಜ್ಯ ಮಟ್ಟದ ತಾಂತ್ರಿಕ ಸಲಹಾ ಮತ್ತು ಅಂದಾಜುಪಟ್ಟಿ ಪರಿಶೀಲನಾ ಸಮಿತಿ ಸಭೆಯಲ್ಲಿ ಅನುಮೋದನೆ ಪಡೆದು ತದನಂತರ ಟೆಂಡರ್ ಕರೆದು ನಿಯಮಾನುಸಾರ ಗುತ್ತಿಗೆದಾರರನ್ನು ನೇಮಿಸಿ, ನಿರ್ದಿಷ್ಟ ಕಾಲಮಿತಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲಾಗುತ್ತದೆ. |

**ಸಂಖ್ಯೆ: ಲೋಇ 59 ಬಿಎಲ್‌ಕ್ಯೂ 2025**

**(ಸತೀಶ ಜಾರಕಿಹೊಳಿ),**
ಲೋಕೋಪಯೋಗಿ ಸಚಿವರು.